# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 57(112) |
| ಸದಸ್ಯರ ಹೆಸರು | : | ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13.02.2023. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅನುದಾನಿತ ಪ್ರೌಢಶಾಲಾ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆಯಿಂದ ಡಿಸೆಂಬರ್ 2015ರವರೆಗೆ ಖಾಲಿ ಆಗಿರುವ ಒಟ್ಟು ಖಾಲಿ ಹುದ್ದೆಗಳೆಷ್ಟು; (ವಿವರ ನೀಡುವುದು) | ಅನುದಾನಿತ ಪ್ರೌಢಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ದಿನಾಂಕ:31-12-2015ರವರೆಗೆ ಖಾಲಿಯಾಗಿರುವ ಒಟ್ಟು ಹುದ್ದೆಗಳ ವಿವರ ಈ ಕೆಳಕಂಡಂತಿದೆ.<br><br>ಅನುದಾನಿತ ಪ್ರೌಢ ಶಾಲೆಗಳಲ್ಲಿನ ಖಾಲಿ ಹುದ್ದೆಗಳ ಸಂಖ್ಯೆ: 3689<br>ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿನ ಖಾಲಿ ಹುದ್ದೆಗಳ ಸಂಖ್ಯೆ (ಕಾರ್ಯಭಾರದ ಆಧಾರದ ಮೇಲೆ ಪರಿಗಣಿತವಾದ ಹುದ್ದೆಗಳು): 998 |
| ಆ) | ಸದರಿ ಅವಧಿಯ ಖಾಲಿ ಇರುವ ಎಲ್ಲಾ ಹುದ್ದೆಗಳಿಗೂ ಅನುಮತಿ ನೀಡದೆ. ಕೆಲವೇ ಹುದ್ದೆಗಳಿಗೆ ಅನುಮೋದನೆ ನೀಡಲು ಆದೇಶ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ) | ಡಿಸೆಂಬರ್ 2015ರವರೆಗೆ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ ಎಲ್ಲಾ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಯಾವಾಗ ಅನುಮತಿ ನೀಡಲಾಗುವುದು; | **ಅನುದಾನಿತ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ:**<br>ಅನುದಾನಿತ ಪ್ರೌಢಶಾಲೆಗಳಲ್ಲಿ ನಿವೃತ್ತಿ, ಮರಣ ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ದಿನಾಂಕ:31-12-2015ರವರೆಗೆ ಖಾಲಿಯಾದ ಒಟ್ಟು ಹುದ್ದೆಗಳು-3689. ಈ ಪೈಕಿ ವೃತ್ತಿ/ಚಿತ್ರಕಲೆ/ಸಂಗೀತ ಶಿಕ್ಷಕರ ಹುದ್ದೆಗಳನ್ನು ಹೊರತುಪಡಿಸಿ ಬಾಕಿ 3633 ಹುದ್ದೆಗಳನ್ನು ಭರ್ತಿ ಮಾಡಲು ಸಹಮತಿ ನೀಡಲಾಗಿದೆ.<br><br>**ಅನುದಾನಿತ ಪದವಿಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ:**<br>ಅನುದಾನಿತ ಪದವಿಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ ಕಾರ್ಯಭಾರದ ಆಧಾರದ ಮೇಲೆ ಪರಿಗಣಿತವಾದ ಒಟ್ಟು 998 ಹುದ್ದೆಗಳನ್ನು ಭರ್ತಿ ಮಾಡಲು ಸಹಮತಿ ನೀಡಲಾಗಿದೆ. |

<table>
<tr>
<td>ಈ)</td>
<td>ಜನವರಿ 2016 ರಿಂದ 2020ರ ಡಿಸೆಂಬರ್‌ವರೆಗೆ ನಿವೃತ್ತಿ, ಮರಣ, ರಾಜೀನಾಮೆಯಿಂದ ಖಾಲಿ ಆಗಿರುವ ಹುದ್ದೆಗಳೆಷ್ಟು; (ವಿವರ ನೀಡುವುದು)</td>
<td>ದಿನಾಂಕ:01.01.2016 ರಿಂದ 31.12.2020ರವರೆಗೆ ಅನುದಾನಿತ ಪ್ರೌಢಶಾಲೆ/ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ವಿವರ.
<table>
<tr><td>ಅನುದಾನಿತ ಪ್ರೌಢಶಾಲೆಗಳಲ್ಲಿನ ಖಾಲಿ ಹುದ್ದೆಗಳ ಸಂಖ್ಯೆ</td><td>ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿನ ಹುದ್ದೆಗಳ ಸಂಖ್ಯೆ</td></tr>
<tr><td>4521</td><td>2159</td></tr>
</table>
</td>
</tr>
<tr>
<td>ಉ)</td>
<td>ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕಾಲಮಿತಿಯಲ್ಲಿ ಅನುಮತಿ ನೀಡಲಾಗುತ್ತದೆ?</td>
<td>ದಿನಾಂಕ:01.01.2016 ರಿಂದ 31.12.2020ರವರೆಗೆ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು, ಆರ್ಥಿಕ ಇಲಾಖೆಯು, ದಿನಾಂಕ:28.11.2022ರಂದು ಈ ಕೆಳಗಿನಂತೆ ಅಭಿಪ್ರಾಯ ನೀಡಿರುತ್ತಾರೆ.<br><br>“ ಅನುದಾನಿತ ಶಾಲಾ-ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ವಿವಿಧ ಕಾರಣಗಳಿಂದ ದಿನಾಂಕ:31.12.2015ರ ಅಂತ್ಯಕ್ಕೆ ತೆರವಾಗಿ ಖಾಲಿ ಉಂಟಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಈಗಾಗಲೇ ಆರ್ಥಿಕ ಇಲಾಖೆಯು ಸಹಮತಿ ನೀಡಿದೆ. ಆದರೆ, ಸದರಿ ನೇಮಕಾತಿ ಪ್ರಕ್ರಿಯೆಗಳೇ ಈವರೆವಿಗೂ ಮುಕ್ತಾಯಗೊಂಡಿರುವುದಿಲ್ಲ. ಆದ್ದರಿಂದ, ಆರ್ಥಿಕ ಇಲಾಖೆಯು ಸಹಮತಿಸಿರುವಂತೆ ದಿನಾಂಕ:31.12.2015ರ ಅಂತ್ಯಕ್ಕೆ ಖಾಲಿ ಉಂಟಾಗಿರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿ ಪೂರ್ಣಗೊಳಿಸುವಂತೆ ತಿಳಿಸಿದೆ.”<br><br>ಈ ಹಿನ್ನೆಲೆಯಲ್ಲಿ ಖಾಸಗಿ ಅನುದಾನಿತ ಪ್ರೌಢಶಾಲೆ/ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015ರ ಅಂತ್ಯದವರೆಗೆ ಮರಣ, ನಿವೃತ್ತಿ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.</td>
</tr>
</table>

ಸಂಖ್ಯೆ: ಇಪಿ 70 ಎಸ್‌ಇಎಸ್ 2023

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಹಾಗೂ ಸಕಾಲ ಸಚಿವರು